## ಅಧ್ಯಾಯ-I

## ಪ್ರಾರಂಭಿಕ

**ಕಲಂ-1. ಸಂಕ್ಷಿಪ್ತ ಹೆಸರು ವ್ಯಾಪ್ತಿ ಮತ್ತು ಪ್ರಾರಂಭ:-**

1) ಈ ಅಧಿನಿಯಮವನ್ನು ಮಾಹಿತಿ ಹಕ್ಕು ಅಧಿನಿಯಮ 2005 ಯೆಂದು ಕರಯತಕ್ಕದ್ದು.
2) ಇದು ಜಮ್ಮು ಮತ್ತು ಕಾಶ್ಮೀರ ರಾಜ್ಯವನ್ನು ಹೊರತುಪಡಿಸಿ ಇಡೀ ಭಾರತಕ್ಕೆ ವ್ಯಾಪ್ತವಾಗತಕ್ಕದ್ದು.
3) ಈ ಅಧಿನಿಯಮದ 4ನೇ ಪ್ರಕರಣದ (1)ನೇ ಉಪ ಪ್ರಕರಣ 5ನೇ ಪ್ರಕರಣದ (1) ಮತ್ತು (2)ನೇ ಉಪ ಪ್ರಕರಣಗಳು 12, 13, 15, 16, 24, 27 ಮತ್ತು 28ನೇ ಪ್ರಕರಣಗಳ ಉಪಬಂಧಗಳು ಕೂಡಲೇ ಜಾರಿಗೆ ಬರತಕ್ಕದ್ದು ಮತ್ತು ಉಳಿದ ಉಪಬಂದಗಳು ಇದನ್ನು ಅಧಿನಿಯಮಿತಗೊಳಿಸಿದ 120ನೇ ದಿನದಿಂದ ಜಾರಿಗೆ ಬರತಕ್ಕದ್ದು.

**ಕಲಂ-2. ಪರಿಭಾಷೆಗಳು:-** ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು .

(ಎ)ಸಮುಚಿತ ಸರ್ಕಾರ ಎಂದರೆ ಸರ್ಕಾರೀ ಪ್ರಾಧಿಕಾರಕ್ಕೆ ಸಂಬಂಧಪಟ್ಟಂತೆ:- ಕೇಂದ್ರ ಸರಕಾರದಿಂದ ಅಥವಾ ಕೇಂದ್ರಾಡಳಿತ ಪ್ರದೇಶದ ಆಡಳಿತದಿಂದ ಸ್ಥಾಪಿತವಾದ, ರಚಿತವಾದ, ಅದರ ಒಡೆತನಕ್ಕೆ ನಿಯಂತ್ರಣಕ್ಕೆ ಒಳಪಟ್ಟ ಅಥವಾ ಕೇಂದ್ರ ಸರಕಾರವು ಅಥವಾ ಕೇಂದ್ರಾಡಳಿತ ಪ್ರದೇಶದ ಆಡಳಿತವು ನೇರವಾಗಿ ಅಥವಾ ಪರೋಕ್ಷವಾಗಿ:-

(i) ಕೇಂದ್ರ ಸರಕಾರ ಒದಗಿಸಿರುವ ನಿಧಿಗಳಿಂದ ಗಣನೀಯ ಆರ್ಥಿಕ ನೆರವು ಪಡೆದ ಸಾರ್ವಜನಿಕ ಪ್ರಾಧಿಕಾರದ ಸಂದರ್ಭದಲ್ಲಿ ಕೇಂದ್ರ ಸರಕಾರ.

(ii) ರಾಜ್ಯ ಸರಕಾರ ಒದಗಿಸಿರುವ ನಿಧಿಗಳಿಂದ ಗಣನೀಯ ಆರ್ಥಿಕ ನೆರವು ಪಡೆದಿರುವ ಸಾರ್ವಜನಿಕ ಪ್ರಾಧಿಕಾರದ ಸಂದರ್ಭದಲ್ಲಿ ರಾಜ್ಯ ಸರಕಾರ.

(ಬಿ) ಕೇಂದ್ರ ಮಾಹಿತಿ ಆಯೋಗ ಎಂದರೆ 12ನೇ ಪ್ರಕರಣದ 1ನೇ ಉಪ ಪ್ರಕರಣದ ಅಡಿಯಲ್ಲಿ ರಚಿತವಾದ ಕೇಂದ್ರ ಮಾಹಿತಿ ಆಯೋಗ.

(ಸಿ)ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರ ಎಂದರೆ 5ನೇ ಪ್ರಕರಣ1ನೇ ಉಪ ಪ್ರಕರಣ ಅಡಿಯಲ್ಲಿ ಹಾಗೇ ಹೆಸರಿಸಲಾದ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಮತ್ತು ಇದು 2ನೇ ಉಪ ಪ್ರಕರಣದ ಅಡಿಯಲ್ಲಿ ಹೆಸರಿಸಲಾದ ಕೇಂದ್ರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಯನ್ನು ಒಳಗೊಳ್ಳುತ್ತದೆ.

(ಡಿ)ಮುಖ್ಯ ಮಾಹಿತಿ ಆಯುಕ್ತ ಮತ್ತು ಮಾಹಿತಿ ಆಯುಕ್ತ ಎಂದರೆ 12ನೇ ಪ್ರಕರನ 3ನೇ ಉಪ ಪ್ರಕರಣದ ಅಡಿಯಲ್ಲಿ ನೇಮಕಗೊಂಡ ಮುಖ್ಯ ಆಯುಕ್ತ ಮತ್ತು ಮಾಹಿತಿ ಆಯುಕ್ತ .

(ಇ)**ಸಕ್ಷಮ ಪ್ರಾಧಿಕಾರ ಎಂದರೆ:-**

(i) ಲೋಕಸಭೆ ಅಥವಾ ರಾಜ್ಯದ ವಿಧಾನ ಸಭೆ ಅಥವಾ ಅಂತಹ ವಿಧಾನ ಸಭೆಯನ್ನು ಹೊಂದಿರುವ ಕೇಂದ್ರಾಡಳಿತ ಪ್ರದೇಶದ ವಿಧಾನ ಸಭೆಯ ಸಂದರ್ಭದಲ್ಲಿ ಸಭಾಧ್ಯಕ್ಷ ಮತ್ತು ರಾಜ್ಯ ಸಭೆ ಅಥವಾ ರಾಜ್ಯಗಳ ವಿಧಾನ ಪರಿಷತ್ತುಗಳ ಸಂದರ್ಭದಲ್ಲಿ ಸಭಾಪತಿ.

(ii) ಸರ್ವೋಚ್ಚ ನ್ಯಾಯಾಲಯದ ಸಂದರ್ಭದಲ್ಲಿ ಭಾರತದ ಮುಖ್ಯ ನ್ಯಾಯಮೂರ್ತಿ.

(iii) ಉಚ್ಚ ನ್ಯಾಯಾಲಯದ ಸಂದರ್ಭದಲ್ಲಿ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿ.

(iv) ಸಂವಿಧಾನದ ಮೂಲಕ ಅಥವಾ ಅದರ ಅಡಿಯಲ್ಲಿ ಸ್ಥಾಪಿತವಾದ ಅಥವಾ ರಚಿತವಾದ ಇತರ ಪ್ರಾಧಿಕಾರಗಳ ಸಂದರ್ಭದಲ್ಲಿ ರಾಷ್ಟ್ರಪತಿ ಅಥವಾ ಸಂದರ್ಭಾನುಸಾರ ರಾಜ್ಯಪಾಲ.

(v) ಸಂವಿಧಾನದ 239ನೇ ಅನುಚ್ಛೇದದ ಅಡಿಯಲ್ಲಿ ನೇಮಕಗೊಂಡ ಆಡಳಿತಾಧಿಕಾರಿ.

(ಎಫ್) **ಮಾಹಿತಿ:-** ಎಂದರೆ ತತ್ಕಾಲದಲ್ಲಿ ಜಾರಿಯಲ್ಲಿ ಇರುವ ಯಾವುದೆ ಇತರ ಕಾನೂನಿನ ಅಡಿಯಲ್ಲಿ ಸಾರ್ವಜನಿಕ ಪ್ರಾಧಿಕಾರಿದಿಂದ ಪಡೆಯಬಹುದಾದ ದಾಖಲೆಗಳು, ದಾಸ್ತಾವೇಜುಗ ಳು, ಮೆಮೋಗಳು, ಇ-ಮೇಲಗಳು, ಅಭಿಪ್ರಾಯಗಳು, ಸಲಹೆಗಳು, ಪತ್ರಿಕಾ ಹೇಳಿಕೆಗಳು, ಸುತ್ತೋಲೆಗಳು, ಆದೇಶಗಳು, ಲಾಗ್ ಪುಸ್ತಕಗಳು, ಕರಾರುಗಳು, ವರದಿಗಳು, ಕಾಗ ದಪತ್ರಗಳು, ನಮೂನೆಗಳು, ಮಾದರಿಗಳು ಯಾವುದೇ ವಿದ್ಯುನ್ಮಾನ ರೂಪದಲ್ಲಿ ಹೊಂದಿರುವ ದತ್ತಾಂಶ ಮತ್ತು ಯಾವುದೇ ಖಾಸಗಿ ನಿಕಾಯಕ್ಕೆ ಸಂಬಂಧಿಸಿದ ಮಾಹಿತಿ ಒಳಗ ೊಂಡಂತೆ ಯಾವುದೇ ರೂಪದಲ್ಲಿರುವ ಯಾವುದೇ ವಿಷಯ ಸಾಮಗ್ರಿ.

(ಜಿ)ಗೊತ್ತುಪಡಿಸಲಾದುದು ಎಂದರೆ ಈ ಅಧಿನಿಯಮದಡಿಯಲ್ಲಿ ಸಮೂಚಿತ ಸರ್ಕಾರ ಅಥವಾ ಸಂದರ್ಭಾನುಸಾರ ಸಕ್ಷಮ ಪ್ರಾಧಿಕಾರವು ಈ ಅಧಿನಿಯಮದಡಿಯಲ್ಲಿ ರಚಿಸಿದ ನಿಯಮಗಳ ಮೂಲಕ ಗೊತ್ತುಪಡಿಸಲಾದುದು.

(ಹೆಚ್)**ಸಾರ್ವಜನಿಕ ಪ್ರಾಧಿಕಾರ ಎಂದರೆ:-**

(ಎ) ಸಂವಿಧಾನದ ಮೂಲಕ ಅಥವಾ ಅದರ ಅಡಿಯಲ್ಲಿ.

(ಬಿ) ಸಂಸತ್ತಿನಿಂದ ಮಾಡಲಾದ ಯಾವುದೇ ಇತರ ಕಾನೂನಿನ ಮೂಲಕ.

(ಸಿ) ರಾಜ್ಯ ವಿಧಾನ ಮಂಡಲದಿಂದ ಮಾಡಲಾದ ಯಾವುದೇ ಇತರ ಕಾನೂನಿನ ಮೂಲಕ.

(ಡಿ) ಸಮೂಚಿತ ಸರ್ಕಾರದಿಂದ ಹೊರಡಿಸಲಾದ ಅಧಿಸೂಚನೆ ಅಥವಾ ಮಾಡಲಾದ ಆದೇಶದ ಮೂಲಕ.

ಸ್ಥಾಪಿತವಾದ ಅಥವಾ ರಚಿತವಾದ ಯಾವುದೇ ಪ್ರಾಧಿಕಾರ ಅಥವಾ ನಿಕಾಯ ಅಥವಾ ಸ್ವಯಂ ಆಡಳಿತ ಸಂಸ್ಥೆ ಮತ್ತು ಇದು:-

(i) ಸಮುಚಿತ ಸರ್ಕಾರದ ಒಡೆತನಕ್ಕೆ, ನಿಯಂತ್ರಣಕ್ಕೆ ಒಳಪಟ್ಟ ಅಥವಾ ಅಂತಹ ಸರಕಾರ ಒದಗಿಸಿದ ನಿಧಿಗಳಿಂದ ನೇರವಾಗಿ ಅಥವಾ ಪರೋಕ್ಷವಾಗಿ ಗಣನೀಯ ಪ್ರಮಾಣ ಹಣಕಾಸು ನೆರವು ಪಡೆದ ಯಾವುದೇ ನಿಕಾಯುವನ್ನು.

(ii) ಸಮೂಚಿತ ಸರ್ಕಾರ ಒದಗಿಸಿದ ನಿಧಿಗಳಿಂದ ನೇರವಾಗಿ ಅಥವಾ ಪರೋಕ್ಷವಾಗಿ ಗಣನೀಯ ಪ್ರಮಾಣದ ಹಣಕಾಸು ನೆರವು ಪಡೆದ ಸರಕಾರೇತರ ಸಂಸ್ಥೆಯನ್ನು ಒಳಗೊಳ್ಳುತ್ತದೆ.

**(ಐ) ದಾಖಲೆಯು;-**

(ಎ)ಯಾವುದೇ ದಸ್ತಾವೇಜು, ಹಸ್ತಪ್ರತಿ ಮತ್ತು ಕಡತವನ್ನು.

(ಬಿ) ಯಾವುದೇ ದಸ್ತಾವೇಜಿನ ಮೈಕ್ರೋಫಿಲಂ, ಮೈಕ್ರೋಫಿಷ್ ಮತ್ತು ಪಡಿಯಚ್ಚು ಪ್ರತಿಯನ್ನು.

(ಸಿ) ಅಂತಹ ಮೈಕ್ರೋಫಿಲಂನಲ್ಲಿ (ಗಾತ್ರವನ್ನು ವಿಸ್ತರಿಸಿರಲಿ ಅಥವಾ ವಿಸ್ತರಿಸದಿರಲಿ) ಸಾಕಾರಗೊಳಿಸಿರುವ ಪ್ರತಿರೂಪ (ಇಮೇಜ್) ಅಥವಾ ಪ್ರತಿರೂಪಗಳ ಮರು ಪ್ರತಿ ಮಾಡುವುದನ್ನು ಮತ್ತು

(ಡಿ) ಗಣಕಯಂತ್ರ ಅಥವಾ ಯಾವುದೇ ಇತರ ಸಾಧನದ ಮೂಲಕ ಸಿದ್ದಪಡಿಸಲಾದ ಯಾವುದೇ ಇತರ ವಿಷಯ ಸಾಮಗ್ರಿಯನ್ನು. ಒಳಗೊಳ್ಳುತ್ತದೆ.

**(ಜೆ) ಮಾಹಿತಿಗಾಗಿ ಹಕ್ಕು** ಎಂದರೆ ಯಾವುದೇ ಸಾರ್ವಜನಿಕ ಪ್ರಾಧಿಕಾರ ಹೊಂದಿರುವ ಅಥವಾ ಅದರ ನಿಯಂತ್ರಣದಲ್ಲಿರುವ, ಈ ಅಧಿನಿಯಮದ ಅಡಿಯಲ್ಲಿ ಪಡೆಯಬಹುದಾದ ಮಾಹಿತಿಯ ಹಕ್ಕು ಮತ್ತು ಇದರಲ್ಲಿ.

(i) ಕೆಲಸದ , ದಸ್ತಾವೇಜಗಳ, ದಾಖಲೆಗಳ, ಪರಿವೀಕ್ಷಣೆ ಮಾಡುವ.

(ii) ದಸ್ತಾವೇಜುಗಳ ಅಥವಾ ದಾಖಲೆಗಳ ಟಿಪ್ಪಣಿಗಳನ್ನು, ಉದ್ಧೃತ ಭಾಗಗಳನ್ನು ಅಥವಾ ಪ್ರಮಾಣೀಕೃತ ಪ್ರತಿಗಳನ್ನು ತೆಗೆದುಕೊಳ್ಳುವ.

(iii) ವಿಷಯ ಸಾಮಗ್ರಿಯ ಪ್ರಮಾಣೀಕೃತ ಮಾದರಿಗಳನ್ನು ಪಡೆದುಕೊಳ್ಳುವ.

(iv) ಡಿಸ್ಕೆಟ್ ಗಳು, ಫ್ಲಾಪಿಗಳು, ಟೇಪುಗಳು, ವಿಡಿಯೋ ಕ್ಯಾಸೆಟ್ ಗಳ ರೂಪದಲ್ಲಿ ಅಥವಾ ಯಾವುದೇ ಇತರ ವಿದ್ಯುನ್ಮಾನ ವಿಧಾನದಲ್ಲಿ ಅಥವಾ ಅಂತಹ ಮಾಹಿತಿಯನ್ನು ಗಣಕಯಂತ್ರದಲ್ಲಿ ಅಥವಾ ಯಾವುದೇ ಇತರ ಸಾದನದಲ್ಲಿ ಸಂಗ್ರಹಿಸಿಟ್ಟಿದ್ದರೆ ಅದರ ಮುದ್ರಿತ ಪ್ರತಿಯ ಮೂಲಕ ಮಾಹಿತಿ ಪಡೆಯುವ, ಹಕ್ಕು ಒಳಗೊಂಡಿರುತ್ತದೆ.

(ಕೆ) ರಾಜ್ಯ ಮಾಹಿತಿ ಆಯೋಗ ಎಂದರೆ 15 ನೇ ಪ್ರಕರಣದ (1) ನೇ ಉಪಪ್ರಕರಣದ ಅಡಿಯಲ್ಲಿ ರಚಿತವಾದ ರಾಜ್ಯ ಮಾಹಿತಿಆಯೋಗ.

(ಎಲ್) ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಮತ್ತು ರಾಜ್ಯ ಮಾಹಿತಿ ಆಯುಕ್ತ ಎಂದರೆ, 15 ನೆ ಪ್ರಕರಣದ (3)ನೆ ಉಪಪ್ರಕರಣದ ಅಡಿಯಲ್ಲಿ ನೇಮಕಗೊಂಡಿರುವ ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಮತ್ತು ರಾಜ್ಯ ಮಾಹಿತಿ ಆಯುಕ್ತ.

(ಎಂ) ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿ ಎಂದರೆ 5ನೇ ಪ್ರಕರಣದ (1) ನೇ ಉಪ ಪ್ರಕರಣದ ಅಡಿಯಲ್ಲಿ ಹೆಸರಿಸಲಾದ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿ ಮತ್ತು (2)ನೇ ಉಪ ಪ್ರಕರಣದ ಅಡಿಯಲ್ಲಿ ಹಾಗೆ ಹೆಸರಿಸಲಾದ ರಾಜ್ಯ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಯನ್ನು ಒಳಗೊಳ್ಳುತ್ತದೆ.

(ಎನ್) ಮೂರನೇ ಪಕ್ಷಕಾರ ಎಂದರೆ ಮಾಹಿತಿಗಾಗಿ ಕೋರಿಕೆ ಸಲ್ಲಿಸುವ ನಾಗರಿಕನನ್ನು ಹೊರತುಪಡಿಸಿದ ವ್ಯಕ್ತಿ ಮತ್ತು ಸಾರ್ವಜನಿಕ ಪ್ರಾದಿಕಾರವನ್ನು ಒಳಗೊಳ್ಳುತ್ತದೆ.